# ಕರ್ನಾಟಕ ವಿಧಾನ ಪರಿಷತ್ತು
## 141ನೇ ಅಧಿವೇಶನ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : ೭೫ (436)

ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 23-09-2020

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಲೋಕೋಪಯೋಗಿ ಇಲಾಖೆಯಲ್ಲಿ ಅನುದಾನ ಲಭ್ಯತೆ ಮೀರಿ ಕಾಮಗಾರಿಗಳನ್ನು ನಿರ್ವಹಿಸಿರುವ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ; (ವಲಯವಾರು ಮಾಹಿತಿ ನೀಡುವುದು) | ರಸ್ತೆ ಮತ್ತು ಸೇತುವೆ ಕಾಮಗಾರಿಗಳ ಅಂದಾಜು ಮೊತ್ತವು ರೂ.500.00 ಲಕ್ಷಕ್ಕಿಂತ ಹೆಚ್ಚಿನ ಮೊತ್ತದ ಕಾಮಗಾರಿಗಳಿಗೆ ಶೇ.50 ರಷ್ಟು ಹಾಗೂ ಕಟ್ಟಡ ಕಾಮಗಾರಿಗಳಿಗೆ ಶೇ.40 ರಷ್ಟು ಅನುದಾನವನ್ನು ಒದಗಿಸಿಕೊಂಡು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅವಕಾಶವಿದ್ದ ಹಿನ್ನೆಲೆಯಲ್ಲಿ ಹೆಚ್ಚುವರಿ ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದರಿಂದ ಹಾಗೂ ಸ್ಥಳೀಯ ಸಮಸ್ಯೆಗಳನ್ನು ನಿವಾರಿಸಲು ಕಾಲಾವಕಾಶ ಬೇಕಾಗುವುದರಿಂದ ಕಾಮಗಾರಿಗಳು ಬಾಕಿ ಉಳಿದಿರುತ್ತವೆ ಅನುದಾನ ಲಭ್ಯತೆಯ ಮೇಲೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿವೆ. |
| ಆ) | ಈ ರೀತಿ ಅನುದಾನ ಲಭ್ಯತೆ ಮೀರಿ ನಿರ್ವಹಿಸಿರುವ ಎಷ್ಟು ಕಾಮಗಾರಿಗಳು ಪೂರ್ಣಗೊಂಡು ಅಂತಿಮ ಬಿಲ್ ಪಾವತಿಸಲಾಗಿದೆ; ಎಷ್ಟು ಕಾಮಗಾರಿ ಗುತ್ತಿಗೆ ಹಂತದಲ್ಲಿವೆ; | ವಿವಿಧ ಲೆಕ್ಕಶೀರ್ಷಿಕೆಗಳಡಿ ಆಗಸ್ಟ್-2020ರ ಅಂತ್ಯಕ್ಕೆ ರೂ. 550349.36 ಲಕ್ಷ ಮೊತ್ತದ ಬಿಲ್ಲುಗಳು ಪಾವತಿಗೆ ಬಾಕಿ ಇರುತ್ತದೆ. |
| ಇ) | ಇದರಿಂದ ರಾಜ್ಯ ಸರ್ಕಾರಕ್ಕೆ ಆಗಲಿರುವ ಹೊರೆ ಎಷ್ಟು? (ಸಂಪೂರ್ಣ ವಿವರ ನೀಡುವುದು) | ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಬಿಲ್ಲುಗಳನ್ನು ಒದಗಿಸಲಾಗುವ ಆಯವ್ಯಯದ ಮಿತಿಯಲ್ಲಿ ತೀರುವಳಿ ಮಾಡಲು ಕ್ರಮವಹಿಸಲಾಗುತ್ತಿದೆ. ಕಾಮಗಾರಿಗಳ ಅನುಷ್ಠಾನದಿಂದ ಸಾರ್ವಜನಿಕರಿಗೆ ಉಪಯುಕ್ತ ಸೌಲಭ್ಯ ನಿರ್ಮಿಸಿಕೊಟ್ಟಿರುವುದರಿಂದ, ಲಾಭದಾಯಕವಾಗಿದೆಯೇ ವಿನಃ ಯಾವುದೇ ನಷ್ಟವಾಗುವುದಿಲ್ಲ. |

ಲೋಇ/599/ಐಎಫ್ಎ/2020

(ಗೋವಿಂದ ಎಂ ಕಾರಜೋಳ)
ಮಾನ್ಯ ಉಪಮುಖ್ಯಮಂತ್ರಿಗಳು
ಹಾಗೂ ಲೋಕೋಪಯೋಗಿ ಸಚಿವರು